**ಕರ್ನಾಟಕ ಸರ್ಕಾರ**

ಸಂ:ಆಇ 02 ಟಿಟಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ:20/05/2021.

**ಸುತ್ತೋಲೆ**

ವಿಷಯ:- ಸಾರ್ವಜನಿಕ ಬ್ಯಾಂಕುಗಳ ಮೂಲಕ ಪಿಂಚಣಿ ಪಾವತಿಸುವ ಕುರಿತು.

****-****

ಸರ್ಕಾರದ ಆದೇಶ ಸಂ:ಆಇ 01 ಟಿಟಿಸಿ 2021, ದಿನಾಂಕ:04.02.2021 ರ ಆದೇಶದಲ್ಲಿ ಈ ಕೆಳಕಂಡ ಸಾರ್ವಜನಿಕ ಕ್ಷೇತ್ರದ ನಾಲ್ಕು ಬ್ಯಾಂಕುಗಳಲ್ಲಿ ಮಾತ್ರ ಪಡೆಯಲು ಪಿಂಚಣಿದಾರರಿಗೆ ಅವಕಾಶ ಕಲ್ಪಿಸಲಾಗಿದೆ. ಪಿಂಚಣಿದಾರರು ಈ ನಾಲ್ಕು ಬ್ಯಾಂಕುಗಳ ಯಾವುದೇ ಶಾಖೆಗಳಲ್ಲಿ ತಮ್ಮ ಪಿಂಚಣಿ ಪಡೆಯಲು ಅಭಿಮತವನ್ನು ನೀಡಲು ಆದೇಶಿಸಲಾಗಿರುತ್ತದೆ.

1. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ.
2. ಬ್ಯಾಂಕ್ ಆಫ್ ಬರೋಡ (ವಿಜಯಾ ಬ್ಯಾಂಕ್)
3. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ (ಕಾರ್ಪೋರೇಷನ್ ಬ್ಯಾಂಕ್)
4. ಕೆನರಾ ಬ್ಯಾಂಕ್ (ಸಿಂಡಿಕೇಟ್ ಬ್ಯಾಂಕ್)

ಸರ್ಕಾರದ ಆದೇಶ ಸಂ:ಆಇ 2 ಟಿಟಿಸಿ 2020, ದಿ:3.3.2020 ರ ಸುತ್ತೋಲೆಯಲ್ಲಿ ನಿವೃತ್ತಿ ಹೊಂದುವ ಅಧಿಕಾರಿ/ನೌಕರರ ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳ ಮಂಜೂರಾತಿಗಾಗಿ ಪಿಂಚಣಿ ದಾಖಲೆಗಳನ್ನು ಮಹಾಲೇಖಪಾಲರಿಗೆ ಸಲ್ಲಿಸುವಾಗ ಪಿಂಚಣಿ ಮಂಜೂರಾತಿಗಾಗಿ ಸಲ್ಲಿಸುವ ದಾಖಲೆಗಳೊಂದಿಗೆ ಬ್ಯಾಂಕ್ ಖಾತೆ ವಿವರಗಳನ್ನು ಸುತ್ತೋಲೆಯ ಅನುಬಂಧದಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಭರ್ತಿ ಮಾಡಿ ಮಹಾಲೇಖಪಾಲರಿಗೆ ಸಲ್ಲಿಸುವಂತೆ ಎಲ್ಲಾ ಆಡಳಿತ ಇಲಾಖೆಗಳು ತಮ್ಮ ಅಧೀನ ಇಲಾಖೆಗಳಿಗೆ ಸೂಚನೆ ನೀಡುವಂತೆ ತಿಳಿಸಲಾಗಿದೆ.

ಮಹಾಲೇಖಪಾಲರ ಪತ್ರ ಸಂ:ಪಿಎಂ/ಜಿ-1/ 2020-21/763, ದಿ;18.03.2021 ರ ಪತ್ರದಲ್ಲಿ ಪಿಂಚಣಿದಾರರ ಬ್ಯಾಂಕ್ ಖಾತೆಗಳ ವಿವರಗಳಲ್ಲದೇ ಪಿಂಚಣಿದಾರರ ಮೊಬೈಲ್ ಸಂಖ್ಯೆಯನ್ನು ನೀಡುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಎಲ್ಲಾ ಇಲಾಖೆಗಳ ಡಿಡಿಓ ರವರು ತಮ್ಮ ಇಲಾಖೆ/ಕಛೇರಿಯಲ್ಲಿ ನಿವೃತ್ತಿ ಹೊಂದುವ ಅಧಿಕಾರಿ/ನೌಕರರ ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳ ಮಂಜೂರಾತಿಗಾಗಿ ಪಿಂಚಣಿ ದಾಖಲೆಗಳನ್ನು ಮಹಾಲೇಖಪಾಲರಿಗೆ ಸಲ್ಲಿಸುವಾಗ ಮೇಲೆ ಉಲ್ಲೇಖಿಸಲಾದ ಖಜಾನೆ-2 ರ ಅನುಕಲನ ಹೊಂದಿದ ನಾಲ್ಕು ಬ್ಯಾಂಕುಗಳಲ್ಲಿ ಯಾವುದಾದರೂ ಒಂದರಲ್ಲಿ ತನ್ನ ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳನ್ನು ಪಡೆಯಲು ಪಿಂಚಣಿದಾರನಿಂದ ಅಭಿಮತ ಪಡೆದು ಈ ಸುತ್ತೋಲೆಯ ಅನುಬಂಧದಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ

ಪಿಂಚಣಿದಾರನಿಂದ ಮೊಬೈಲ್ ಸಂಖ್ಯೆ, ಬ್ಯಾಂಕ್ ವಿವರಗಳನ್ನು ಕಡ್ಡಾಯವಾಗಿ ಪಡೆದುಕೊಂಡು ಪಿಂಚಣಿ ದಾಖಲೆಗಳೊಂದಿಗೆ ಮಹಾಲೇಖಪಾಲರಿಗೆ ಸಲ್ಲಿಸುವಂತೆ ಆದೇಶಿಸಿದೆ. ಎಲ್ಲಾ ಆಡಳಿತ ಇಲಾಖೆಗಳು ತಮ್ಮ ಅಧೀನದ ಇಲಾಖೆಗಳಿಗೆ ಈ ಬಗ್ಗೆ ಸೂಚನೆ ನೀಡುವಂತೆ ತಿಳಿಸಿದೆ.

Signed by Shobha Ha
Date: 20-05-2021 12:52:03
Reason: Approved
(ಶೋಭ ಎ. ಹೆಚ್)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆನಿ ಮತ್ತು ಬಿಸಿಸಿ).

ಪ್ರತಿಗಳು:-

1. ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5326/5369 ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು(ಲೆಕ್ಕ ತನಿಖೆ-1), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು(ಲೆಕ್ಕ ತನಿಖೆ-2), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ ಬೆಂಗಳೂರು.
4. ಉಪ ಮಹಾಲೇಖಪಾಲರು (ಪಿಂಚಣಿ), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
7. ಖಜಾನೆ ಆಯುಕ್ತರು, 6ನೇ ಮಹಡಿ, ಕೆ.ಪಿ.ಸಿ.ಎಲ್., ಗ್ರೀನ್ ಕಟ್ಟಡ, ಔಷಧ ನಿಯಂತ್ರಣ ಆವರಣ, ಬೆಂಗಳೂರು-560001.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ.
11. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು.
12. ಜನರಲ್ ಮ್ಯಾನೇಜರ್, ಭಾರತೀಯ ರಿಸರ್ವ್ ಬ್ಯಾಂಕ್, ನೃಪತುಂಗ ರಸ್ತೆ, ಬೆಂಗಳೂರು.
13. ಎಲ್ಲಾ ಪಿಂಚಣಿ ಪಾವತಿ ಬ್ಯಾಂಕುಗಳಿಗೆ-ಖಜಾನೆ ಆಯುಕ್ತರು ಮುಖಾಂತರ.
14. ಎಲ್ಲಾ ಜಿಲ್ಲಾ ಖಜಾನೆಗಳಾಧಿಕಾರಿಗಳು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಸುತ್ತೋಲೆ ಸಂಖ್ಯೆ:ಆಇ 02 ಟಿಟಿಸಿ 2020,
ಬೆಂಗಳೂರು, ದಿನಾಂಕ: 20/05/2021. ಕ್ಕೆ
ಅನುಬಂಧ

## ನಮೂನೆ

### ಬ್ಯಾಂಕಿನಲ್ಲಿ ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳನ್ನು ಪಡೆಯುವ ಅರ್ಜಿ

ಪಿಂಚಣಿ ಮತ್ತು ಪಿಂಚಣಿ ಸೌಲಭ್ಯಗಳನ್ನು ಈ ಕೆಳಕಂಡ ಬ್ಯಾಂಕಿನಲ್ಲಿ ಪಡೆಯುವ ಅರ್ಜಿ ಸಲ್ಲಿಕೆ.

1. ಪಿಂಚಣಿದಾರನ ಹೆಸರು:-
2. ಮೊಬೈಲ್ ಸಂಖ್ಯೆ:-
3. ಖಜಾನೆ ಹೆಸರು:-
4. ಬ್ಯಾಂಕಿನ ಹೆಸರು, ಶಾಖೆ ಮತ್ತು ವಿಳಾಸ:-
5. ಬ್ಯಾಂಕ್ ಖಾತೆ ಸಂಖ್ಯೆ:-
6. ಐ.ಎಫ್.ಎಸ್.ಸಿ. ಕೋಡ್:-
7. ಎಂ.ಐ.ಸಿ.ಆರ್. ಸಂಖ್ಯೆ:-

ಸಹಿ/-
(ಪಿಂಚಣಿದಾರನ ಹೆಸರು)

ಸಹಿ/-
ಇಲಾಖಾ ಮುಖ್ಯಸ್ಥರು/ ಇಲಾಖಾಧಿಕಾರಿ/
ಹಣ ಸೆಳೆಯುವ ಅಧಿಕಾರಿ